ಕರ್ನಾಟಕ ಸರ್ಕಾರ

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು

ಜಿಲ್ಲಾ ನಗರಾಭಿವೃದ್ಧಿ ಕೋಶ, ಚಿಕ್ಕಮಗಳೂರು

E-Mail :- **ka.chikkamagaluru.dudc@gmail.com** ☎ **08262-239010**

1310208 DUDCCK-ADMN0UDOE/4/2026 ದಿನಾಂಕ:28.07.2026

|| ನೇಮಕಾತಿ ಅಧಿಸೂಚನೆ ||

ವಿಷಯ:- ಪೌರಕಾರ್ಮಿಕರ ವಿಶೇಷ ನೇಮಕಾತಿ ಮಾಡುವ ಕುರಿತು.

ಉಲ್ಲೇಖ:- 1. ಸರ್ಕಾರದ ಅಧಿಸೂಚನೆ ಸಂ:ನಅಇ 176/ ಜಿಇಎಲ್./2022 (ಭಾ-2) (ಇ) ದಿನಾಂಕ: 23.11.2022.
2. ಸರ್ಕಾರದ ಆದೇಶ ಸಂಖ್ಯೆ ನಅಇ 57 ಟಿಎಂಎಸ್ 2024 (ಇ) ದಿನಾಂಕ:27.09.2024.
3. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ಬೆಂಗಳೂರು ಇವರ ಆದೇಶ ಸಂಖ್ಯೆ: 1554386 ಡಿಎಂಎ ಇ.ಎಸ್.ಟಿ /2/ಜಿ.ಆರ್.ಪಿ.ಡಿ /31/2024 ದಿನಾಂಕ: 23.10.2024.

****

ಚಿಕ್ಕಮಗಳೂರು ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಲ್ಲಿ ನೇರ ಪಾವತಿಯಡಿ ಕಾರ್ಯ ನಿರ್ವಹಿಸುತ್ತಿರುವ ಪೌರಕಾರ್ಮಿಕರನ್ನು ಖಾಲಿ ಇರುವ ನೇರ ನೇಮಕಾತಿ ಪೌರಕಾರ್ಮಿಕರ ಹುದ್ದೆಗಳಿಗೆ ವಿಶೇಷ ನೇಮಕಾತಿ ಮೂಲಕ ಭರ್ತಿ ಮಾಡಲು ಉಲ್ಲೇಖ (2) ಮತ್ತು (3) ರಲ್ಲಿ ನಿಗಧಿಪಡಿಸಿದಂತೆ ಅರ್ಹ ಅಭ್ಯರ್ಥಿಗಳಿಂದ ನಿಗಧಿತ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ನಮೂನೆಗಳನ್ನು ಚಿಕ್ಕಮಗಳೂರು ಜಿಲ್ಲಾಧಿಕಾರಿ ಕಚೇರಿಯ ಜಿಲ್ಲಾ ನಗರಾಭಿವೃದ್ಧಿ ಕೋಶ, ಹಾಗೂ ಆಯಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಪಡೆಯಬಹುದು. ಭರ್ತಿ ಮಾಡಿದ ಅರ್ಜಿಗಳನ್ನು ದಿನಾಂಕ: 31.08.2026 ರೊಳಗೆ ಜಿಲ್ಲಾ ನಗರಾಭಿವೃದ್ಧಿಕೋಶ, ಜಿಲ್ಲಾಧಿಕಾರಿಗಳ ಕಛೇರಿ, ಚಿಕ್ಕಮಗಳೂರು ಅಥವಾ ಆಯಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ದಾಖಲಾತಿಗಳೊಂದಿಗೆ ಸಲ್ಲಿಸಬಹುದಾಗಿದೆ.

ಕ್ರ ಸಂ	ಹುದ್ದೆಯ ಹೆಸರು	ನಗರ ಸ್ಥಳೀಯ ಸಂಸ್ಥೆ	ಒಟ್ಟು ಹುದ್ದೆ	ಕನಿಷ್ಠ ವಿದ್ಯಾರ್ಹತೆ / ಅರ್ಹತೆ
1	ಪೌರಕಾರ್ಮಿಕ	ನಗರಸಭೆ ಚಿಕ್ಕಮಗಳೂರು	15	1. ವಿದ್ಯಾರ್ಹತೆ ಅನ್ವಯಿಸುವುದಿಲ್ಲ. 2. ಕನ್ನಡ ಮಾತನಾಡಲು ಗೊತ್ತಿರಬೇಕು 3. ಆಯಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ನೇರಪಾವತಿಯಡಿ ಪೌರಕಾರ್ಮಿಕ ಹುದ್ದೆಯಲ್ಲಿ ಕೆಲಸ ಮಾಡುತ್ತಿರುವ ನೌಕರರು
2		ಪುರಸಭೆ ಕಡೂರು	3	
3		ಪುರಸಭೆ ತರೀಕೆರೆ	3	
4		ಪಟ್ಟಣ ಪಂಚಾಯಿತಿ ಮೂಡಿಗೆರೆ	2	
5		ಪಟ್ಟಣ ಪಂಚಾಯಿತಿ ಶೃಂಗೇರಿ	3	
6		ಪಟ್ಟಣ ಪಂಚಾಯಿತಿ ಅಜ್ಜಂಪುರ	3	

1. ಹುದ್ದೆಗಳ ವರ್ಗೀಕರಣ :

ನಗರಸಭೆ ಚಿಕ್ಕಮಗಳೂರು

ಕ್ರ. ಸ.	ವರ್ಗೀಕರಣದ ವಿವರ	ಇತರ ಅಭ್ಯರ್ಥಿ	ಮಹಿಳಾ ಅಭ್ಯರ್ಥಿ	ಗ್ರಾಮೀಣ ಅಭ್ಯರ್ಥಿ	ಅಂಗ ವಿಕಲರು	ಮಾಜಿ ಸೈನಿಕರು	ಕನ್ನಡ ಮಾಧ್ಯಮ	ಯೋಜನಾ ನಿರಾಶ್ರಿತರು	ತೃತೀಯ ಲಿಂಗ	ಒಟ್ಟು
1	ಪರಿಶಿಷ್ಟ ಜಾತಿ	1	0	1	0	0	0	0	0	2
2	ಪ.ಪಂ	0	0	0	0	0	0	0	0	0
3	ಪ್ರವರ್ಗ-1	1	0	0	0	0	0	0	0	1
4	ಪ್ರವರ್ಗ-2ಎ	1	1	1	0	0	0	0	0	3
5	ಪ್ರವರ್ಗ-2ಬಿ	0	0	0	0	0	0	0		0
6	ಪ್ರವರ್ಗ-3ಎ	0	0	0	0	0	0	1	0	1
7	ಪ್ರವರ್ಗ-3ಬಿ	0	0	0	0	0	0	0	1	1
8	ಸಾಮಾನ್ಯ ಅರ್ಹತೆ	0	3	1	1	2	0	0	0	7
	ಜುಮ್ಲಾ	**3**	**4**	**3**	**1**	**2**	**0**	**1**	**1**	**15**

ಪುರಸಭೆ, ಕಡೂರು

ಕ್ರ. ಸ.	ವರ್ಗೀಕರಣದ ವಿವರ	ಇತರ ಅಭ್ಯರ್ಥಿ	ಮಹಿಳಾ ಅಭ್ಯರ್ಥಿ	ಗ್ರಾಮೀಣ ಅಭ್ಯರ್ಥಿ	ಅಂಗ ವಿಕಲರು	ಮಾಜಿ ಸೈನಿಕರು	ಕನ್ನಡ ಮಾಧ್ಯಮ	ಯೋಜನಾ ನಿರಾಶ್ರಿತರು	ತೃತೀಯ ಲಿಂಗ	ಒಟ್ಟು
1	ಪರಿಶಿಷ್ಟ ಜಾತಿ	0	0	1	0	0	0	0	0	1
2	ಪ.ಪಂ	0	0	0	0	0	0	0	0	0
3	ಪ್ರವರ್ಗ-1	1	0	0	0	0	0	0	0	1
4	ಪ್ರವರ್ಗ-2ಎ	0	0	0	0	0	0	0	0	0
5	ಪ್ರವರ್ಗ-2ಬಿ	0	0	0	0	0	0	0	0	0
6	ಪ್ರವರ್ಗ-3ಎ	0	0	0	0	0	0	0	0	0
7	ಪ್ರವರ್ಗ-3ಬಿ	0	0	0	0	0	0	0	0	0
8	ಸಾಮಾನ್ಯ ಅರ್ಹತೆ	0	1	0	0	0	0	0	0	1
	ಜುಮ್ಲಾ	1	1	1	0	0	0	0	0	3

ಪುರಸಭೆ, ತರೀಕೆರೆ

ಕ್ರ. ಸ.	ವರ್ಗೀಕರಣದ ವಿವರ	ಇತರ ಅಭ್ಯರ್ಥಿ	ಮಹಿಳಾ ಅಭ್ಯರ್ಥಿ	ಗ್ರಾಮೀಣ ಅಭ್ಯರ್ಥಿ	ಅಂಗ ವಿಕಲರು	ಮಾಜಿ ಸೈನಿಕರು	ಕನ್ನಡ ಮಾಧ್ಯಮ	ಯೋಜನಾ ನಿರಾಶ್ರಿತರು	ತೃತೀಯ ಲಿಂಗ	ಒಟ್ಟು
1	ಪರಿಶಿಷ್ಟ ಜಾತಿ	0	0	0	0	0	0	0	0	0
2	ಪ.ಪಂ	0	0	0	0	0	0	0	0	0
3	ಪ್ರವರ್ಗ-1	0	0	0	0	0	0	0	0	0
4	ಪ್ರವರ್ಗ-2ಎ	0	0	1	0	0	0	0	0	1
5	ಪ್ರವರ್ಗ-2ಬಿ	0	0	0	0	0	0	0	0	0
6	ಪ್ರವರ್ಗ-3ಎ	0	0	0	0	0	0	0	0	0
7	ಪ್ರವರ್ಗ-3ಬಿ	0	0	0	0	0	0	0	0	0
8	ಸಾಮಾನ್ಯ ಅರ್ಹತೆ	0	1	0	0	0	1	0	0	2
	ಜುಮ್ಲಾ	**0**	**1**	**1**	**0**	**0**	**1**	**0**	**0**	**3**

ಪಟ್ಟಣ ಪಂಚಾಯ್ತಿ, ಮೂಡಿಗೆರೆ

ಕ್ರ. ಸ.	ವರ್ಗೀಕರಣದ ವಿವರ	ಇತರ ಅಭ್ಯರ್ಥಿ	ಮಹಿಳಾ ಅಭ್ಯರ್ಥಿ	ಗ್ರಾಮೀಣ ಅಭ್ಯರ್ಥಿ	ಅಂಗ ವಿಕಲರು	ಮಾಜಿ ಸೈನಿಕರು	ಕನ್ನಡ ಮಾಧ್ಯಮ	ಯೋಜನಾ ನಿರಾಶ್ರಿತರು	ತೃತೀಯ ಲಿಂಗ	ಒಟ್ಟು
1	ಪರಿಶಿಷ್ಟ ಜಾತಿ	0	0	0	0	0	0	0	0	0
2	ಪ.ಪಂ	0	0	0	0	0	0	0	0	0
3	ಪ್ರವರ್ಗ-1	0	0	0	0	0	0	0	0	0
4	ಪ್ರವರ್ಗ-2ಎ	1	0	0	0	0	0	0	0	1
5	ಪ್ರವರ್ಗ-2ಬಿ	0	0	0	0	0	0	0	0	0
6	ಪ್ರವರ್ಗ-3ಎ	0	0	0	0	0	0	0	0	0
7	ಪ್ರವರ್ಗ-3ಬಿ	0	0	0	0	0	0	0	0	0
8	ಸಾಮಾನ್ಯ ಅರ್ಹತೆ	0	1	0	0	0	0	0	0	1
	ಜುಮ್ಲಾ	**1**	**1**	**0**	**0**	**0**	**0**	**0**	**0**	**2**

ಪಟ್ಟಣ ಪಂಚಾಯ್ತಿ, ಶೃಂಗೇರಿ

ಕ್ರ. ಸ.	ವರ್ಗೀಕರಣದ ವಿವರ	ಇತರ ಅಭ್ಯರ್ಥಿ	ಮಹಿಳಾ ಅಭ್ಯರ್ಥಿ	ಗ್ರಾಮೀಣ ಅಭ್ಯರ್ಥಿ	ಅಂಗ ವಿಕಲರು	ಮಾಜಿ ಸೈನಿಕರು	ಕನ್ನಡ ಮಾಧ್ಯಮ	ಯೋಜನಾ ನಿರಾಶ್ರಿತರು	ತೃತೀಯ ಲಿಂಗ	ಒಟ್ಟು
1	ಪರಿಶಿಷ್ಟ ಜಾತಿ	0	0	0	0	0	0	0	0	0
2	ಪ.ಪಂ	0	0	0	0	0	0	0	0	0
3	ಪ್ರವರ್ಗ-1	0	1	0	0	0	0	0	0	1
4	ಪ್ರವರ್ಗ-2ಎ	0	0	0	0	0	0	0	0	0
5	ಪ್ರವರ್ಗ-2ಬಿ	0	0	0	0	0	0	0	0	0
6	ಪ್ರವರ್ಗ-3ಎ	0	0	0	0	0	0	0	0	0
7	ಪ್ರವರ್ಗ-3ಬಿ	0	0	0	0	0	0	0	0	0
8	ಸಾಮಾನ್ಯ ಅರ್ಹತೆ	0	0	1	1	0	0	0	0	2
	ಜುಮ್ಲಾ	**0**	**1**	**1**	**1**	**0**	**0**	**0**	**0**	**3**

ಪಟ್ಟಣ ಪಂಚಾಯ್ತಿ, ಅಜ್ಜಂಪುರ

ಕ್ರ. ಸ.	ವರ್ಗೀಕರಣದ ವಿವರ	ಇತರ ಅಭ್ಯರ್ಥಿ	ಮಹಿಳಾ ಅಭ್ಯರ್ಥಿ	ಗ್ರಾಮೀಣ ಅಭ್ಯರ್ಥಿ	ಅಂಗ ವಿಕಲರು	ಮಾಜಿ ಸೈನಿಕರು	ಕನ್ನಡ ಮಾಧ್ಯಮ	ಯೋಜನಾ ನಿರಾಶ್ರಿತರು	ತೃತೀಯ ಲಿಂಗ	ಒಟ್ಟು
1	ಪರಿಶಿಷ್ಟ ಜಾತಿ	0	0	0	0	0	0	0	0	0
2	ಪ.ಪಂ	0	0	0	0	0	0	0	0	0
3	ಪ್ರವರ್ಗ-1	0	0	0	0	0	0	0	0	0
4	ಪ್ರವರ್ಗ-2ಎ	0	0	0	0	0	0	0	0	0
5	ಪ್ರವರ್ಗ-2ಬಿ	0	0	0	0	0	0	0	0	0
6	ಪ್ರವರ್ಗ-3ಎ	0	0	0	0	0	0	1	0	1
7	ಪ್ರವರ್ಗ-3ಬಿ	0	0	0	0	0	0	0	0	0
8	ಸಾಮಾನ್ಯ ಅರ್ಹತೆ	0	1	1	0	0	0	0	0	2
	ಜುಮ್ಲಾ	**0**	**1**	**1**	**0**	**0**	**0**	**1**	**0**	**3**

ಷರಾ : **ಸರ್ಕಾರದ ಆದೇಶ ದಿನಾಂಕ:13.05.2026 ಮತ್ತು ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 02 ಸೆಹಿಮ 2023 ದಿನಾಂಕ:08.03.2023 ರಂತೆ** ಮೀಸಲಾತಿ ಬಿಂದುಗಳನ್ನು ನಿಗಧಿ ಮಾಡಲಾಗಿದೆ.

2. ಅಭ್ಯರ್ಥಿಗಳಿಗೆ ಸೂಚನೆ ಮತ್ತು ಷರತ್ತುಗಳು:

1. ಪೌರಕಾರ್ಮಿಕ ಅಂದರೆ ಬೀದಿ ಸ್ವಚ್ಛತಾ ಪೌರಕಾರ್ಮಿಕರು ಮಾತ್ರ, ಹಾಗೂ ಕನಿಷ್ಟ 2 ವರ್ಷಗಳ ಕಾಲ ಅರ್ಜಿ ಸಲ್ಲಿಸುತ್ತಿರುವ ನಗರ ಸ್ಥಳೀಯ ಸಂಸ್ಥೆಯಲ್ಲಿ ನೇರಪಾವತಿಯಡಿ ಸೇವೆ ಸಲ್ಲಿಸಿರಬೇಕು.
2. ವಯೋಮಿತಿ:-ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದಂದು ಕನಿಷ್ಠ 18 ವರ್ಷ ಗರಿಷ್ಠ 55 ವರ್ಷ ವಯೋಮಿತಿ ಹೊಂದಿರತಕ್ಕದ್ದು.
3. ಅರ್ಜಿಯನ್ನು ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ಚಿಕ್ಕಮಗಳೂರು ವಿಳಾಸಕ್ಕೆ ಅಂಚೆ ಮೂಲಕ ಅಥವಾ ಖುದ್ದಾಗಿ ಅಥವಾ ಆಯಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸಲ್ಲಿಸಬಹುದಾಗಿದೆ.
4. ನಿಗಧಿತ ದಿನಾಂಕದ ನಂತರ ಹಾಕಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
5. ನಿಗದಿತ ಜಾತಿ ಅಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರದ ಬಗ್ಗೆ ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳು (ಅಧ್ಯಕ್ಷರು, ಜಾತಿ ಆದಾಯ ಪರಿಶೀಲನಾ ಸಮಿತಿ) ಸಿಂಧುತ್ವ ಪ್ರಮಾಣ ಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.
6. ನೇಮಕಾತಿ ಬಗ್ಗೆ ಅಂತಿಮ ತೀರ್ಮಾನವನ್ನು ಅಧ್ಯಕ್ಷರು, ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿ, ಚಿಕ್ಕಮಗಳೂರು ಜಿಲ್ಲೆ ಇವರು ಕಾಯ್ದಿರಿಸಿಕೊಂಡಿರುತ್ತಾರೆ.
7. ಆಯ್ಕೆಯನ್ನು ಅಭ್ಯರ್ಥಿಯ ಮೀಸಲಾತಿ ಆಧಾರದ ಮೇಲೆ ಮಾತ್ರ ಪರಿಗಣಿಸಲಾಗುವುದು.

3. ಅಂಗವಿಕಲ ಅಭ್ಯರ್ಥಿಗಳು:

ಸರ್ಕಾರದ ಆದೇಶ ಸಂ: ಡಿಪಿಎಆರ್ 54 ಎಸ್.ಆರ್.ಆರ್ 2012 ದಿನಾಂಕ:23.06.2012 ರಂತೆ ಡಿ' ಗ್ರೂಪ್ (ಪೌರಕಾರ್ಮಿಕ) ಹುದ್ದೆಗೆ ದೃಷ್ಟಿ ಮಾಂದ್ಯತೆಯನ್ನು ಪರಿಗಣಿಸಲಾಗುವುದಿಲ್ಲ. ಅಲ್ಲದೇ ಈ ಹುದ್ದೆಗಳು ಸ್ವಚ್ಛತಾ ಕಾರ್ಯಗಳಿಗೆ ಸಂಬಂಧಿಸಿದ ಹುದ್ದೆಗಳಾಗಿದ್ದು, ದೈಹಿಕ ಶ್ರಮದ ಅಗತ್ಯವಿರುತ್ತದೆ. ಆದ್ದರಿಂದ ನೇಮಕಾತಿ ಪ್ರಕ್ರಿಯೆಯಲ್ಲಿ ಕುಷ್ಠರೋಗದಿಂದ ಗುಣಮುಖರಾದವರು (Leprosy Cured), ಶ್ರವಣದೋಷ (Hearing Impaired) ಅಭ್ಯರ್ಥಿಗಳನ್ನು ಮಾತ್ರ ಪರಿಗಣಿಸಲಾಗುತ್ತದೆ. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸೆನೆನಿ 2005, ದಿನಾಂಕ 19.11.2005 ರಲ್ಲಿ ನಿಗಧಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರವನ್ನು ಪಡೆದು, ಅದರ ದೃಢೀಕೃತ ಪ್ರತಿಯನ್ನು ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ಸಲ್ಲಿಸುವುದು.

4. **ಜಾತಿ/ಮೀಸಲಾತಿ ಪ್ರಮಾಣ ಪತ್ರಗಳು**:

ಮೀಸಲಾತಿ ಸೌಲಭ್ಯ ಅಪೇಕ್ಷಿಸುವ ಅಭ್ಯರ್ಥಿಗಳು ಈ ಕೆಳಕಂಡ ಮೂಲ ದಾಖಲೆಗಳನ್ನು ನಿಗಧಿತ ನಮೂನೆಯಲ್ಲಿ ಮಾತ್ರ ಸಂಬಂಧಪಟ್ಟ ಪ್ರಾಧಿಕಾರದಿಂದ (ಸಂಬಂಧಪಟ್ಟ ತಹಶೀಲ್ದಾರ್ ರಿಂದ) ಪಡೆದು ಮೂಲ ದಾಖಲೆಗಳನ್ನು ಪರಿಶೀಲಿಸುವ ದಿನಾಂಕದಂದು ಹಾಜರುಪಡಿಸಬೇಕು. ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ, ಅವರ ಅಭ್ಯರ್ಥಿತನವನ್ನು ಅರ್ಹತೆಯಡಿಯಲ್ಲಿ ಪರಿಗಣಿಸಲಾಗುವುದು.

ಪ.ಜಾ/ಪ.ಪಂ ದವರು ನಮೂನೆ-ಡಿಯಲ್ಲಿ, ಪ್ರವರ್ಗ-1ದವರು ನಮೂನೆ-ಇ ಯಲ್ಲಿ, ಪ್ರವರ್ಗ 2ಎ,2ಬಿ,3ಎ,3ಬಿ: ದವರು ನಮೂನೆ-ಎಫ್ ನಲ್ಲಿ ಸಂಬಂಧಪಟ್ಟ ತಹಶೀಲ್ದಾರ್ ರವರಿಂದ ಚಾಲ್ತಿಯಲ್ಲಿರುವ ಪ್ರಮಾಣ ಪತ್ರವನ್ನು ಪಡೆದಿರಬೇಕು.

5. **ಯೋಜನಾ ನಿರಾಶ್ರಿತರಾದ ಕುಟುಂಬದ ಅಭ್ಯರ್ಥಿಗಳು**:

ಯೋಜನೆಗಳಿಂದ ನಿರಾಶ್ರಿತರ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ್ ಮಾಡುವ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರ್ ರವರು ನೀಡಿದ ಪ್ರಮಾಣ ಪತ್ರವನ್ನು ಪಡೆದಿರಬೇಕು.

6. **ಮಾಜಿ ಸೈನಿಕರ ಕುಟುಂಬದ ಅಭ್ಯರ್ಥಿಗಳು**:

ಮಾಜಿ ಸೈನಿಕರು ಎನ್ನುವ ಬಗ್ಗೆ ಅಥವಾ ಭಾರತ ದೇಶದ ಒಕ್ಕೂಟ ಸಶಸ್ತ್ರ ದಳದಲ್ಲಿ ಸೇವೆ ಸಲ್ಲಿಸುತ್ತಿರುವಾಗ ಮರಣ ಹೊಂದಿದ ಅಥವಾ ಶಾಶ್ವತವಾಗಿ ಅಂಗಹೀನರಾದ ವ್ಯಕ್ತಿಗಳ ಕುಟುಂಬದ ಸದಸ್ಯರು ಎಂಬ ಬಗ್ಗೆ ಸಕ್ಷಮ ಮಿಲಿಟರಿ ಅಧಿಕಾರಿಗಳಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು.

7. **ಗ್ರಾಮೀಣ ಅಭ್ಯರ್ಥಿ :**

ಗ್ರಾಮೀಣ ಅಭ್ಯರ್ಥಿ ಎಂದರೆ, ಒಂದು ಹುದ್ದೆಗಾಗಿ ನಿಯಮಿಸಲಾದ ಅರ್ಹತಾ ಪರೀಕ್ಷೆಯು ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಾಗಿದ್ದಲ್ಲಿ, 1ನೇ ತರಗತಿಯಿಂದ 10ನೇ ತರಗತಿಯವರೆಗೆ ವ್ಯಾಸಂಗದ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಪ್ರಾಧಿಕಾರಿಯಿಂದ ದೃಢೀಕೃತ ಗ್ರಾಮೀಣ ದೃಢೀಕರಣ ಪತ್ರವನ್ನು ಪಡೆದಿರಬೇಕು. ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು, ಈ ಮೀಸಲಾತಿಯನ್ನು ಪಡೆಯಲು ಅರ್ಹರು.

ಗ್ರಾಮೀಣ ಅಭ್ಯರ್ಥಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೈಮು ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ-2ರ ಪ್ರಮಾಣ ಪತ್ರವಲ್ಲದೇ, ಮೇಲ್ ಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ-1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಪಟ್ಟ ತಹಶೀಲ್ದಾರ್ ರವರಿಂದ ಪಡೆದು, ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 ಪ್ರವರ್ಗ-2ಎ,2ಬಿ,3ಎ,3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2ರಲ್ಲಿ ನಿಗಧಿತ ಪ್ರಾಧಿಕಾರಿಗಳಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ಮೇಲು ರುಜು ಮತ್ತು ಮೊಹರು ಮಾಡಿಸಿರಬೇಕು.

8. **ಕನ್ನಡ ಮಾಧ್ಯಮ ಅಭ್ಯರ್ಥಿಗಳು :**

ಸರ್ಕಾರದ ಅಧಿಸೂಚನೆ ಸಂ:ಡಿಪಿಎಆರ್ 71 ಎಸ್ ಆರ್ ಆರ್ 2001 ದಿ: 24.10.2002 ರಲ್ಲಿ ಹೊರಡಿಸಿರುವ ಕರ್ನಾಟಕ ಸರ್ಕಾರಿ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ (9)(1)(ಸಿ)ರನ್ವಯ ಅಭ್ಯರ್ಥಿಯು 1 ರಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆ ಎನ್ನುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರು ಪ್ರಮಾಣ ಪತ್ರವನ್ನು ಪಡೆದಿರಬೇಕು.

9. ಅರ್ಹತಾ ಷರತ್ತುಗಳು :

1. ಅರ್ಜಿದಾರರು ಭಾರತೀಯ ನಾಗರೀಕನಾಗಿರತಕ್ಕದ್ದು.
2. ಪೌರಕಾರ್ಮಿಕ ಅಂದರೆ ಬೀದಿ ಸ್ವಚ್ಛತಾ ಪೌರಕಾರ್ಮಿಕರು ಮಾತ್ರ, ಹಾಗೂ ಕನಿಷ್ಟ 2 ವರ್ಷಗಳ ಕಾಲ ಅರ್ಜಿ ಸಲ್ಲಿಸುತ್ತಿರುವ ನಗರ ಸ್ಥಳೀಯ ಸಂಸ್ಥೆಯಲ್ಲಿ ನೇರಪಾವತಿಯಡಿ ಸೇವೆ ಸಲ್ಲಿಸುತ್ತಿರಬೇಕು.
3. ನೇಮಕಾತಿಯನ್ನು ನಗರ ಸ್ಥಳೀಯ ಸಂಸ್ಥೆಗೆ ಮಾತ್ರ ಸೀಮಿತಗೊಳಿಸುವುದು.
4. ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವವಿರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತವಾಗಿರಬೇಕು. ದೈಹಿಕವಾಗಿ ಸಾಮರ್ಥ್ಯರಿರುವ ಬಗ್ಗೆ ಗ್ರೂಪ್ 'ಡಿ' (ಪೌರಕಾರ್ಮಿಕರು) ನೌಕರರಿಗೆ ನಿಗಧಿಪಡಿಸಲಾದ ಕನಿಷ್ಠ ದೇಹದಾರ್ಢ್ಯತೆ ಹೊಂದಿರಬೇಕು. ಈ ಬಗ್ಗೆ ಸರಕಾರಿ ವೈದ್ಯರ ಪ್ರಮಾಣ ಅರ್ಜಿಯೊಂದಿಗೆ ಸಲ್ಲಿಸುವುದು.
5. ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ಅಧ್ಯಕ್ಷರು, ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿ, ಚಿಕ್ಕಮಗಳೂರು ಜಿಲ್ಲೆ / ರಾಜ್ಯ ಸರ್ಕಾರ ಕಾಯ್ದಿರಿಸಿಕೊಂಡಿದೆ. ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಯನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

10. **ಕೆಳಕಂಡ ಮೂಲ ದಾಖಲೆಗಳ ದೃಢೀಕೃತ ಪ್ರತಿಗಳನ್ನು ಅರ್ಜಿಯೊಂದಿಗೆ ಲಗತ್ತಿಸುವುದು .**

- ಜನ್ಮ ದಿನಾಂಕವನ್ನು ನಮೂದಿಸಿರುವ ಆಧಾರ್/ ಜನನ ಪ್ರಮಾಣ ಪತ್ರ/ಪಡಿತರ ಚೀಟಿ/ ಮತದಾರರ ಗುರುತಿನ ಚೀಟಿ/ ಎಸ್.ಎಸ್.ಎಲ್.ಸಿ ಅಥವಾ ಜನ್ಮ ದಿನಾಂಕವನ್ನು ತೋರಿಸುವ ಶೈಕ್ಷಣಿಕ ಸಂಚಿತ ದಾಖಲೆಯ ಉದ್ಧೃತ ಭಾಗ.

- ಅರ್ಹತೆ-

ನೇರಪಾವತಿ	ನೇಮಕಾತಿಯ ಆದೇಶ ಪತ್ರ ಅಥವಾ ನಡವಳಿ ಹಾಗೂ ಪೌರಾಯುಕ್ತರು / ಮುಖ್ಯಾಧಿಕಾರಿಯಿಂದ ಸೇವೆ ಸಲ್ಲಿಸುತ್ತಿರುವ ಅವಧಿಗೆ ಅನುಗುಣವಾಗಿ ಪ್ರಮಾಣ ಪತ್ರ, 2 ವರ್ಷ ಮೇಲ್ಪಟ್ಟು ವೇತನ ಪಡೆದ ದಾಖಲೆ.

- ಸೈನಿಕ ಸೇವೆಯಿಂದ ಬಿಡುಗಡೆಯಾದ/ಮುಕ್ತಿಹೊಂದಿದ ಬಗೆಗಿನ ಪ್ರಮಾಣ ಪತ್ರ (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ)
- ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ,3ಬಿ ಗಳ ಪ್ರಮಾಣ ಪತ್ರಗಳು (ಮೀಸಲಾತಿ ಕೋರಿದ್ದಲ್ಲಿ)
- ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-1 ಮತ್ತು 2 ರಲ್ಲಿ (ಮೀಸಲಾತಿ ಕೋರಿದ್ದಲ್ಲಿ)
- ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
- ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
- ಯೋಜನೆಗಳಿಂದ ನಿರಾಶ್ರಿತರಾದ ಬಗ್ಗೆ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
- ವಾಸ್ತವ್ಯ ದೃಢೀಕರಣ ಪತ್ರ.
- ಮೇಲ್ಕಂಡಂತೆ ನಿಗದಿಪಡಿಸಿದ ಎಲ್ಲಾ ದಾಖಲೆಗಳನ್ನು ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಮಾತ್ರ ಮೂಲ ದಾಖಲಾತಿಗಳ ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

11. ಇತರೆ ಸೂಚನೆಗಳು:

1. ಅರ್ಜಿಯಲ್ಲಿ ತಪ್ಪು/ಸುಳ್ಳು ಮಾಹಿತಿ ನೀಡಿ ಉದ್ಯೋಗ ಪಡೆಯವ ಅಭ್ಯರ್ಥಿಗಳ ನೇಮಕಾತಿಯನ್ನು ವಜಾಗೊಳಿಸುವುದಲ್ಲದೆ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು.
2. ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೇ ದಿನವು ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕವಾಗುವುದು.
3. ಅರ್ಜಿಯಲ್ಲಿ ನೀಡುವ ವಿಳಾಸವೇ ಅಂತಿಮವಾಗಿದ್ದು, ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಿ ಕೊಡಲಾಗುವುದು. ನಂತರದಲ್ಲಿ ವಿಳಾಸ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.
4. ಅಂತಿಮವಾಗಿ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶಗಳನ್ನು ನೀಡುವ ಮುನ್ನ ಯಾವುದೇ ಹಂತದಲ್ಲಿ ಯಾವುದೇ ಕಾರಣ/ಮಾಹಿತಿ ನೀಡದೆ, ಈ ನೇಮಕಾತಿ ಪ್ರಕ್ರಿಯೆಯನ್ನು ಮುಂದೂಡುವ ಅಥವಾ ರದ್ದುಪಡಿಸುವ ಅಥವಾ ವಿಧಿಸಲಾಗಿರುವ ಯಾವುದೇ ಷರತ್ತನ್ನು ಸಡಿಲಗೊಳಿಸುವ ಅಥವಾ ಹೆಚ್ಚುವರಿ ಷರತ್ತನ್ನು ವಿಧಿಸುವ, ತುಂಬಲಾಗುವ ಹುದ್ದೆಗಳ ಸಂಖ್ಯೆಯನ್ನು ಬದಲಾಯಿಸುವ/ನಿರ್ಣಯಿಸುವ ಅಧಿಕಾರವನ್ನು ಅಧ್ಯಕ್ಷರು, ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿ, ಚಿಕ್ಕಮಗಳೂರು ಜಿಲ್ಲೆ ರವರು ಕಾಯ್ದಿರಿಸಿಕೊಂಡಿರುತ್ತಾರೆ.

5. ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆಪಟ್ಟಿಯಲ್ಲಿ ಸೇರ್ಪಡೆಯಾಗಿದೆ ಎಂಬುದರ ಆಧಾರದ ಮೇಲೆ ಅಭ್ಯರ್ಥಿಗೆ ನೇಮಕಾತಿಯ ಹಕ್ಕು ದೊರೆಯುವುದಿಲ್ಲ.

6. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ನಗರಾಭಿವೃದ್ಧಿ ಕೋಶ ಜಿಲ್ಲಾಧಿಕಾರಿ ಕಛೇರಿ ಚಿಕ್ಕಮಗಳೂರು / ಸಮೀಪದ ನಗರ ಸ್ಥಳೀಯ ಸಂಸ್ಥೆಯನ್ನು ಸಂಪರ್ಕಿಸತಕ್ಕದ್ದು.

Digitally signed by
BHANWAR SINGH MEENA
Date: 30-07-2026
12:10:51

ಅಧ್ಯಕ್ಷರು,
ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ
ಜಿಲ್ಲಾಧಿಕಾರಿ, ಚಿಕ್ಕಮಗಳೂರು ಜಿಲ್ಲೆ

ಪ್ರತಿಯನ್ನು :

1. ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಬೆಂಗಳೂರು ಇವರ ಅವಗಾಹನೆಗೆ ಸಲ್ಲಿಸಿದೆ.
2. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು ಇವರ ಅವಗಾಹನೆಗೆ ಸಲ್ಲಿಸಿದೆ.
3. ಸಂಕಲನಾಧಿಕಾರಿ, ಸರ್ಕಾರಿ ಮುದ್ರಣಾಲಯ, ಸರಸ್ವತಿಪುರಂ, ಮೈಸೂರು. ಕರ್ನಾಟಕ ರಾಜ್ಯ ಪತ್ರ ಮೈಸೂ ಇವರಿಗೆ ಕಳುಹಿಸುತ್ತಾ ಈ ಅಧಿಸೂಚನೆಯನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಹಾಗೂ ಪ್ರಕಟಿತ 20 ಪ್ರತಿಗಳನ್ನು ಜಿಲ್ಲಾಧಿಕಾರಿಗಳು, ಚಿಕ್ಕಮಗಳೂರು ಜಿಲ್ಲೆ ಇವರಿಗೆ ಒದಗಿಸಲು ಕೋರಿದೆ.
4. ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು ಚಿಕ್ಕಮಗಳೂರು ಜಿಲ್ಲೆ, ರವರಿಗೆ ಮಾಹಿತಿಗಾಗಿ.
5. ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಿಗೆ, ಕಚೇರಿ ಪ್ರಕಟಣಾ ಫಲಕದಲ್ಲಿ ಹಾಗೂ ಪೌರಕಾರ್ಮಿಕರ ಮಾಹಿತಿಗೆ ಪ್ರಚುರಪಡಿಸಲು ತಿಳಿಸಿದೆ.
6. ಈ ಕಾರ್ಯಾಲಯದ ಸೂಚನಾ ಫಲಕಕ್ಕೆ.